All India Radio: Bangalore
National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

03.12.2025 19.35 p.m.

***************

ಮುಖ್ಯಾಂಶಗಳು

- ಸಂಚಾರ್ ಸಾಥಿ ಅಪ್ಲಿಕೇಶನ್‌ನಿಂದ ಬೇಹುಗಾರಿಕೆ; ಪ್ರತಿಪಕ್ಷಗಳ ಆರೋಪ ತಳ್ಳಿ ಹಾಕಿದ ಕೇಂದ್ರ ಸರ್ಕಾರ
- ನೈಸರ್ಗಿಕ ಪದ್ಧತಿ ಅಳವಡಿಸಿಕೊಳ್ಳುವಂತೆ ದೇಶದ ರೈತರಿಗೆ ಪ್ರಧಾನಿ ನರೇಂದ್ರ ಮೋದಿ ಕರೆ
- ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಹಂತ-೨; ಮುಂದಿನ ವರ್ಷ ಫೆಬ್ರವರಿ ೧೪ ರಂದು ಅಂತಿಮ ಮತದಾರರ ಪಟ್ಟಿ ಪ್ರಕಟ
- ಎರಡನೇ ಏಕದಿನ ಕ್ರಿಕೆಟ್; ದಕ್ಷಿಣಾ ಆಫ್ರಿಕಾ ತಂಡಕ್ಕೆ ೩೫೯ ರನ್‌ಗಳ ಗುರಿ ನೀಡಿದ ಭಾರತ

***************

ಸಂಚಾರ್ ಸಾಥಿ ಅಪ್ಲಿಕೇಶನ್ ಬಳಸಿ ಬೇಹುಗಾರಿಕೆ ನಡೆಸಲು ಸರ್ಕಾರ ಪ್ರಯತ್ನಿಸುತ್ತಿದೆ ಎಂಬ ವಿರೋಧ ಪಕ್ಷಗಳ ಆರೋಪಗಳನ್ನು ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ತಳ್ಳಿ ಹಾಕಿದ್ದಾರೆ.

ಲೋಕಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಸಂಚಾರ್ ಸಾಥಿ ಅಪ್ಲಿಕೇಶನ್‌ನೊಂದಿಗೆ ಬೇಹುಗಾರಿಕೆ ಸಾಧ್ಯವಿಲ್ಲ ಅಥವಾ ಆಗುವುದಿಲ್ಲ ಬಳಕೆದಾರರು ತಮ್ಮ ಅನುಕೂಲಕ್ಕೆ ತಕ್ಕಂತೆ ನೋಂದಾಯಿಸಿಕೊಳ್ಳುವ ಮೂಲಕ ಆಪ್‌ನ್ನು ಸಕ್ರಿಯಗೊಳಿಸಬಹುದು. ಯಾವುದೇ ಸಮಯದಲ್ಲಿ ಬಳಕೆದಾರರು ತಮ್ಮ ಮೊಬೈಲ್‌ನಿಂದ ಆಪ್ ಅನ್ನು ನಿಷ್ಕ್ರಿಯಗೊಳಿಸಬಹುದು ಎಂದು ಸ್ಪಷ್ಟಪಡಿಸಿದ್ದಾರೆ.

ವಂಚನೆಯಿಂದ ನಾಗರಿಕರನ್ನು ರಕ್ಷಿಸಲು ಕೇಂದ್ರ ಸರ್ಕಾರ ಈ ಸೌಲಭ್ಯವನ್ನು ಒದಗಿಸಿದೆ ಎಂದು ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದರು.

ಇನ್ನೊಂದೆಡೆ, ಮೊಬೈಲ್ ತಯಾರಕರು ಸಂಚಾರಿ ಸಾಥಿ ಅಪ್ಲಿಕೇಶನ್ ಅನ್ನು ಮೊಬೈಲ್‌ನಲ್ಲಿ ಮೊದಲೇ ಸಕ್ರಿಯಗೊಳಿಸುವುದನ್ನು ಕಡ್ಡಾಯಗೊಳಿಸದೇ ಇರಲು ಕೇಂದ್ರ ಸರ್ಕಾರ ನಿರ್ಧರಿಸಿದೆ.

ಸಂಚಾರಿ ಸಾಥಿ ಅಪ್ಲಿಕೇಶನ್ ಬಗ್ಗೆ ಹೆಚ್ಚುತ್ತಿರುವ ವಿವಾದದ ಹಿನ್ನೆಲೆಯಲ್ಲಿ ಸರ್ಕಾರ ಈ ಕ್ರಮ ಕೈಗೊಂಡಿದೆ.

ನಾಗರಿಕರು ಯಾವಾಗ ಬೇಕಾದರು ಈ ಅಪ್ಲಿಕೇಶನ್ ಅನ್ನು ನಿಷ್ಕ್ರಿಯಗೊಳಿಸಬಹುದು. ಬಳಕೆದಾರರ ರಕ್ಷಣೆಯೇ ಸಂಚಾರಿ ಸಾಥಿ ಆಪ್‌ನ ಪ್ರಮುಖ ಗುರಿಯಾಗಿದೆ ಎಂದು ಸರ್ಕಾರ ಸ್ಪಷ್ಟಪಡಿಸಿದೆ.

ಇದುವರೆಗೆ ೧ ಕೋಟಿ ೪೦ ಲಕ್ಷ ಬಳಕೆದಾರರು ಈ ಅಪ್ಲಿಕೇಶನ್ ಅನ್ನು ಡೌನ್‌ಲೋಡ್ ಮಾಡಿದ್ದಾರೆ. ಪ್ರತಿ ದಿನ ೨ ಸಾವಿರ ವಂಚನೆ ಪ್ರಕರಣಗಳು ವರದಿಯಾಗುತ್ತಿವೆ ಎಂದು ಕೇಂದ್ರ ಸಂವಹನ ಸಚಿವಾಲಯ ತಿಳಿಸಿದೆ.

ಕಳೆದ ೨೪ ಗಂಟೆಗಳಲ್ಲಿ ೬ ಲಕ್ಷ ನಾಗರಿಕರು ಈ ಆಪ್ ಡೌನ್‌ಲೋಡ್ ಮಾಡಲು ನೋಂದಾಯಿಸಿಕೊಂಡಿದ್ದಾರೆ. ಆಪ್ ಬಳಕೆಯಲ್ಲಿ ೧೦ ಪಟ್ಟು ಹೆಚ್ಚಾಗಿದೆ. ಅಪ್ಲಿಕೇಶನ್

ಸುರಕ್ಷಿತವಾಗಿದೆ. ಸೈಬರ್ ವಂಚಕರಿಂದ ನಾಗರಿಕರಿಗೆ ಸಹಾಯ ಮಾಡುವುದು ಮಾತ್ರ ಈ ಆಪ್‌ನ ಉದ್ದೇಶವಾಗಿದೆ ಎಂದು ಸಚಿವಾಲಯ ಹೇಳಿದೆ.

***************

ಚಂಡಮಾರುತ, ಅಕಾಲಿಕ ಮಳೆ ಮತ್ತು ಭೂಕಂಪದಂತಹ ಪ್ರಮುಖ ನೈಸರ್ಗಿಕ ಘಟನೆಗಳಿಂದ ಜೀವ ಮತ್ತು ಆಸ್ತಿ ನಷ್ಟ ತಡೆಗಟ್ಟಲು ಅಥವಾ ತಗ್ಗಿಸಲು ಹಲವಾರು ಕ್ರಮಗಳನ್ನು ಸರ್ಕಾರ ಕೈಗೊಂಡಿದೆ ಎಂದು ಕೇಂದ್ರ ಭೂವಿಜ್ಞಾನ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ.

ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಭಾರತೀಯ ಹವಾಮಾನ ಇಲಾಖೆಯು ಸಾರ್ವಜನಿಕರಿಗೆ ಮತ್ತು ಸಂಬಂಧಪಟ್ಟ ಪಾಲುದಾರರಿಗೆ ನಿರಂತರವಾಗಿ ಸಮಯೋಚಿತ ಎಚ್ಚರಿಕೆ ಮತ್ತು ಮುನ್ಸೂಚನೆ ನೀಡುತ್ತಿದೆ ಎಂದರು.

ಭಾರತವನ್ನು ಹವಾಮಾನ-ಸಿದ್ಧ ಮತ್ತು ಹವಾಮಾನ-ಸ್ಮಾರ್ಟ್ ರಾಷ್ಟ್ರವನ್ನಾಗಿ ಮಾಡಲು ಇತ್ತೀಚೆಗೆ 'ಮಿಷನ್ ಮೌಸಮ್' ಎಂಬ ನೂತನ ಯೋಜನೆಯನ್ನು ಪ್ರಾರಂಭಿಸಲಾಗಿದೆ. ಅಲ್ಲದೇ, ಇತ್ತೀಚೆಗೆ ಆರಂಭಿಸಲಾದ ಭಾರತ್ ಮುನ್ಸೂಚನೆ ವ್ಯವಸ್ಥೆಯು ಹವಾಮಾನ ಮುನ್ಸೂಚನೆಯನ್ನು ಸುಧಾರಿಸಲು ಅಭಿವೃದ್ಧಿಪಡಿಸಲಾಗಿದೆ ಎಂದು ಸಚಿವ ಜಿತೇಂದ್ರ ಸಿಂಗ್ ಮಾಹಿತಿ ನೀಡಿದರು.

***************

ರಾಷ್ಟ್ರೀಯ ಶಿಕ್ಷಣ ನೀತಿ-ಎನ್‌ಇಪಿ ಮಾತೃಭಾಷೆ ಆಧಾರಿತ ಶಿಕ್ಷಣವನ್ನು ಪ್ರತಿಪಾದಿಸುತ್ತಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ.

ರಾಜ್ಯಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಸಮಗ್ರ ಶಿಕ್ಷಣ ಅಭಿಯಾನ, ಎನ್‌ಇಪಿ ಮತ್ತು ಪಿಎಂ ಶ್ರೀ ಯೋಜನೆಗಳು ಪರಸ್ಪರ ಸಂಬಂಧ ಹೊಂದಿವೆ. ಸಮಗ್ರ ಶಿಕ್ಷಣ ಅಭಿಯಾನವನ್ನು ರಾಷ್ಟ್ರೀಯ ಶಿಕ್ಷಣ ನೀತಿಯ ಶಿಫಾರಸ್ಸುಗಳೊಂದಿಗೆ ಸಂಯೋಜಿಸಲಾಗಿದೆ ಎಂದು ತಿಳಿಸಿದರು.

ದೇಶಾದ್ಯಂತ ಶಾಲೆಗಳಲ್ಲಿ ೫೦ ಸಾವಿರ ಹೊಸ ಅಟಲ್ ಟಿಂಕರಿಂಗ್ ಪ್ರಯೋಗಾಲಯಗಳನ್ನು ಸರ್ಕಾರ ಸ್ಥಾಪಿಸಲಿದೆ. ಶಾಲಾ ಮಟ್ಟದಲ್ಲಿ ನಾವೀನ್ಯತೆಯನ್ನು ಉತ್ತೇಜಿಸಲು ಅಟಲ್ ಇನೋವೇಷನ್ ಮಿಷನ್ ಅಡಿಯಲ್ಲಿ ೧೦ ಸಾವಿರಕ್ಕೂ ಹೆಚ್ಚು ಅಟಲ್ ಟಿಂಕರಿಂಗ್ ಪ್ರಯೋಗಾಲಯಗಳನ್ನು ಈಗಾಗಲೇ ಸ್ಥಾಪಿಸಲಾಗಿದೆ ಎಂದರು.

ಶಾಲೆಗಳಲ್ಲಿ ಸಂಶೋಧನೆ ಮತ್ತು ನಾವೀನ್ಯತೆಯನ್ನು ಉತ್ತೇಜಿಸಲು ಪ್ರಧಾನಿ ನರೇಂದ್ರ ಮೋದಿ ಅವರು ಈ ಯೋಜನೆಯನ್ನು ಪ್ರಾರಂಭಿಸಿದ್ದಾರೆ ಎಂದು ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ.

***************

ದೇಶಾದ್ಯಂತ ಇಲ್ಲಿಯವರೆಗೆ ೫ ಲಕ್ಷಕ್ಕೂ ಹೆಚ್ಚು ೫ಜಿ ಬೇಸ್ ಟ್ರಾನ್ಸ್‌ಸಿವರ್ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಕೇಂದ್ರ ಸಂವಹನ ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ ತಿಳಿಸಿದ್ದಾರೆ.

ಲೋಕಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ಭಾರತ್ ನೆಟ್ ಯೋಜನೆಯಡಿಯಲ್ಲಿ ಗ್ರಾಮೀಣ ಸಂಪರ್ಕ ಸುಧಾರಿಸಿದೆ. ಈ ವರ್ಷದ ಅಕ್ಟೋಬರ್ ವೇಳೆಗೆ ೨.೧೪ ಲಕ್ಷ ಗ್ರಾಮ ಪಂಚಾಯಿತಿಗಳು ಬ್ರಾಡ್‌ಬ್ಯಾಂಡ್ ಸಂಪರ್ಕಕ್ಕಾಗಿ ಸೇವೆಗೆ ಸಿದ್ಧವಾಗಿದೆ. ಅಲ್ಲದೇ, ಈ

ಯೋಜನೆಯಡಿ ದೇಶಾದ್ಯಂತ ೧೩.೬೬ ಲಕ್ಷ ಫೈಬರ್ ಟು ಹೋಮ್ ಸಂಪರ್ಕಗಳನ್ನು ಒದಗಿಸಲಾಗಿದೆ ಎಂದು ತಿಳಿಸಿದರು.

ಡಿಜಿಟಲ್ ಭಾರತ್ ನಿಧಿಯನ್ನು ಬಳಸಿಕೊಂಡು ಕೇಂದ್ರ ಸರ್ಕಾರ ಹಲವಾರು ಕ್ರಮಗಳನ್ನು ಕೈಗೊಂಡಿದೆ. ಭಾರತ್ ನೆಟ್ ಯೋಜನೆಯು ಗ್ರಾಮಪಂಚಾಯಿತಿಗಳು, ಗಡಿ ಪ್ರದೇಶಗಳಲ್ಲಿ ಬ್ರಾಡ್‌ಬ್ಯಾಂಡ್ ಸಂಪರ್ಕವನ್ನು ಒದಗಿಸುತ್ತಿದೆ ಎಂದು ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ ಹೇಳಿದರು.

***************

ನೈಸರ್ಗಿಕ ಕೃಷಿಯು ಜೀವ-ವೈವಿಧ್ಯತೆಯನ್ನು ಬೆಂಬಲಿಸಲು ಸಸ್ಯಗಳು, ಮರಗಳು ಮತ್ತು ಜಾನುವಾರುಗಳು ಸಹಭಾಳ್ವೆ ನಡೆಸುವ ವೈವಿಧ್ಯಮಯ ಕ್ಷೇತ್ರಗಳನ್ನು ಉತ್ತೇಜಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಸಾಮಾಜಿಕ ಜಾಲತಾಣದಲ್ಲಿ ತಮ್ಮ ಲೇಖನ ಹಂಚಿಕೊಂಡಿರುವ ಪ್ರಧಾನಿ ಮೋದಿ, ಭಾರತದಾದ್ಯಂತ ಜನರು ನೈಸರ್ಗಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಲು ಮತ್ತು ವಿಸ್ತರಿಸುವಂತೆ ಕರೆ ನೀಡಿದರು.

ನೈಸರ್ಗಿಕ ಕೃಷಿಯು ಭಾರತದ ಸಾಂಪ್ರದಾಯಿಕ ಜ್ಞಾನ ವ್ಯವಸ್ಥೆ ಮತ್ತು ರಾಸಾಯನಿಕ ಬಳಸದೆ ಬೆಳೆಗಳನ್ನು ಬೆಳೆಸಲು ಆಧುನಿಕ ತತ್ವಗಳಿಂದ ಬಂದಿವೆ ಎಂದು ತಿಳಿಸಿದರು.

ನೈಸರ್ಗಿಕ ಕೃಷಿ ಕ್ಷೇತ್ರದಲ್ಲಿ ಭಾರತ ಶ್ಲಾಘನೀಯ ಪ್ರಗತಿ ಸಾಧಿಸಿದೆ. ಕಳೆದ ವರ್ಷ ಸರ್ಕಾರವು ನೈಸರ್ಗಿಕ ಕೃಷಿಯ ರಾಷ್ಟ್ರೀಯ ಮಿಷನ್ ಅನ್ನು ಪ್ರಾರಂಭಿಸಿದೆ. ಇದು ಈಗಾಗಲೇ ಲಕ್ಷಾಂತರ ರೈತರನ್ನು ಸುಸ್ಥಿರ ಅಭ್ಯಾಸಗಳನ್ನು ಸಂಪರ್ಕಿಸಿದೆ. ಶ್ರೀ ಅನ್ನ ಉತ್ತೇಜಿಸುವ ಭಾರತದ ಪ್ರಯತ್ನಗಳಿಗೆ ನೈಸರ್ಗಿಕ ಕೃಷಿ ನಿಕಟ ಸಂಬಂಧ ಹೊಂದಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

***************

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಹಂತ-೨ ಪ್ರಾರಂಭವಾದಾಗಿನಿಂದ ೫೦ ಕೋಟಿ ೯೭ ಲಕ್ಷಕ್ಕೂ ಹೆಚ್ಚು ನೋಂದಣಿ ಅರ್ಜಿಗಳನ್ನು ಮತದಾರರಲ್ಲಿ ವಿತರಿಸಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

ಈ ಹಂತದಲ್ಲಿ ಸುಮಾರು ೫೧ ಕೋಟಿ ಮತದಾರರಲ್ಲಿ ಶೇಕಡ ೯೯.೮೩ ರಷ್ಟು ಮತದಾರರನ್ನು ಸೇರಿಸಲಾಗುವುದು. ಇಲ್ಲಿಯವರೆಗೆ ಸುಮಾರು ೪೭ ಕೋಟಿ ಅರ್ಜಿಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ ಎಂದು ಆಯೋಗ ಹೇಳಿದೆ.

ಛತ್ತೀಸ್‌ಗಢ, ಗೋವಾ, ಗುಜರಾತ್, ಕೇರಳ, ಮಧ್ಯಪ್ರದೇಶ, ರಾಜಸ್ಥಾನ, ತಮಿಳುನಾಡು, ಉತ್ತರ ಪ್ರದೇಶ, ಪಶ್ಚಿಮ ಬಂಗಾಳ, ಪುದುಚೆರಿ, ಲಕ್ಷದೀಪ ಹಾಗೂ ಅಂಡಮಾನ್ ನಿಕೋಬಾರ್ ದ್ವೀಪಗಳು ಸೇರಿದಂತೆ ಒಟ್ಟು ೯ ರಾಜ್ಯಗಳು ಮತ್ತು ಮೂರು ಕೇಂದ್ರಾಡಳಿತ ಪ್ರದೇಶಗಳಲ್ಲಿ ಕಳೆದ ತಿಂಗಳ ೪ ರಂದು ಎರಡನೇ ಹಂತದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಆರಂಭವಾಗಿದೆ. ಮುಂದಿನ ವರ್ಷ ಫೆಬ್ರವರಿ ೧೪ ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಣೆಯೊಂದಿಗೆ ಈ ಪ್ರಕ್ರಿಯೆ ಪೂರ್ಣಗೊಳ್ಳಲಿದೆ.

***************

೨೦೨೬ರ ಫೆಬ್ರವರಿಯಲ್ಲಿ ಭಾರತ-ಎಐ ಇಂಪ್ಯಾಕ್ಟ್ ಶೃಂಗಸಭೆಗೆ ಪೂರಕವಾಗಿ ಪ್ರಾದೇಶಿಕ ಕೃತಕಬುದ್ಧಿಮತ್ತೆ ಇಂಪ್ಯಾಕ್ಟ್ ಸಮ್ಮೇಳನ ೨೦೨೫ ಶಿಲಾಂಗ್‌ನಲ್ಲಿಂದು ನಡೆಯಿತು.

ವರ್ಚುಯಲ್ ಮೂಲಕ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ದೇಶಾದ್ಯಂತ ಪ್ರಾದೇಶಿಕ ಎಐ ಇಂಪ್ಯಾಕ್ಟ್ ಸಮ್ಮೇಳನ ಆಯೋಜಿಸಲಾಗುತ್ತಿದೆ. ಶಿಲಾಂಗ್‌ನಲ್ಲಿ ನಡೆಯುತ್ತಿರುವ ಈ ಸಮ್ಮೇಳನವು ನಾಗರಿಕರು, ಭೂಮಿ ಮತ್ತು ಪ್ರಗತಿ ಎಂಬ ಮೂರು ವಿಷಯದ ಮೇಲೆ ಕೇಂದ್ರೀಕರಿಸಿದೆ ಎಂದು ಹೇಳಿದರು.

ದೇಶದಲ್ಲಿ ಕೃತಕಬುದ್ಧಿಮತ್ತೆ ವಲಯದ ಅಭಿವೃದ್ಧಿಗಾಗಿ ಕಳೆದ ಐದು ವರ್ಷಗಳಲ್ಲಿ ೧೦ ಸಾವಿರದ ೩೦೦ ಕೋಟಿ ರೂಪಾಯಿಗಳು ಹಂಚಿಕೆ ಮಾಡಲಾಗಿದೆ. ಪ್ರತಿಯೊಬ್ಬರು ಕೃತಕಬುದ್ಧಿಮತ್ತೆ ಸಂಪನ್ಮೂಲಗಳನ್ನು ಪಡೆಯುವಂತಾಗಲು ಸಾಮಾನ್ಯ ಕಂಪ್ಯೂಟಿಂಗ್ ಸೌಲಭ್ಯವನ್ನು ರಚಿಸಲಾಗಿದೆ. ಇದುವರೆಗೆ ೩೮ ಸಾವಿರಕ್ಕೂ ಹೆಚ್ಚು ಗ್ರಾಫಿಕ್ಸ್ ಸಂಸ್ಕರಣಾ ಘಟಕಗಳನ್ನು ಅನಾವರಣಗೊಳಿಸಲಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

***************

ರಾಯ್ಪುರದ ಶಹೀದ್ ವೀರ್ ನಾರಾಯಣ್ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳ ನಡುವಿನ ಸರಣಿಯ ಎರಡನೇ ಏಕದಿನ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಭಾರತ ನಿಗದಿತ ೫೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೩೫೮ ರನ್ ಮಾಡಿದೆ.

ಗೆಲುವಿನ ಗುರಿ ಬೆನ್ನತ್ತಿರುವ ದಕ್ಷಿಣ ಆಫ್ರಿಕಾ ಇತ್ತೀಚಿನ ವರದಿ ಬಂದಾಗ ೨೩.೫೧ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೩೫೮ ರನ್ ಮಾಡಿ ಆಡುತ್ತಿದೆ.

***************

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ೨೩ನೇ ಭಾರತ-ರಷ್ಯಾ ವಾರ್ಷಿಕ ಶೃಂಗಸಭೆಗಾಗಿ ನಾಳೆಯಿಂದ ಭಾರತ ಭೇಟಿ ಕೈಗೊಳ್ಳಲಿದ್ದಾರೆ. ಶೃಂಗಸಭೆಯ ಸಮಯದಲ್ಲಿ ಉಭಯ ರಾಷ್ಟ್ರಗಳು ಹಲವಾರು ಒಪ್ಪಂದಗಳಿಗೆ ಸಹಿ ಹಾಕುವ ಸಾಧ್ಯತೆಯಿದೆ.

ವ್ಯಾಪಾರ, ಆರ್ಥಿಕತೆ, ಆರೋಗ್ಯ ರಕ್ಷಣೆ, ಶೈಕ್ಷಣಿಕ, ಸಂಸ್ಕೃತಿ ಮತ್ತು ಮಾಧ್ಯಮಕ್ಕೆ ಸಂಬಂಧಿಸಿದ ಕ್ಷೇತ್ರಗಳಲ್ಲಿ ಒಪ್ಪಂದಗಳಿಗೆ ಸಹಿ ಹಾಕಲಾಗುವ ನಿರೀಕ್ಷೆಯಿದೆ. ಈ ಭೇಟಿಯ ಸಮಯದಲ್ಲಿ ಎರಡೂ ರಾಷ್ಟ್ರಗಳ ನಡುವೆ ನಿರಂತರವಾಗಿ ಬೆಳೆಯುತ್ತಿರುವ ವ್ಯಾಪಾರ ಮತ್ತು ಆರ್ಥಿಕ ಸಂಬಂಧಗಳ ಮೇಲೆ ಗಮನ ಹರಿಸಲಾಗುವುದು.

***************

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೩೧ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೫ ಸಾವಿರದ ೧೦೬ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೪೬ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೫ ಸಾವಿರದ ೯೮೬ ಅಂಕಗಳು ದಾಖಲಾಗಿವೆ.

ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೯೦ ರೂಪಾಯಿ ೧೯ ಪೈಸೆಯಷ್ಟಾಗಿದೆ.

*******ಮುಕ್ತಾಯ*******